



ಅರುಣ ಪಿ. ಭಟ್ಟ


## ವಾರಭವಿಷ್ಯ: 13.03.2025ರಿಂದ 19.03.2025ರವರೆಗೆ




ಈ ವಾರ ತಾಳ್ಮೆ ಮತ್ತು ಧೈರ್ಯ ಬಹಳ ಮುಖ್ಯವಾಗುತ್ತದೆ. ಸಮಯದ ಕೊರತೆ ವಿಪರೀತವಾಗಿ ಕಾಡುತ್ತದೆ. ವ್ಯವಹಾರಗಳ ವಿಸ್ತರಣೆಗೆ ಶ್ರಮ ಹಾಕುತ್ತೀರಿ. ಆರೋಗ್ಯ ಉತ್ತಮವಾಗಿರುತ್ತದೆ. ನಿಮ್ಮ ಕೆಲಸ ಕಾರ್ಯಗಳಲ್ಲಿ ಸಕಾರಾತ್ಮಕ ಬದಲಾವಣೆಯನ್ನು ತಂದುಕೊಳ್ಳುತ್ತೀರಿ. ವಾರದ ಅಂತ್ಯಕ್ಕೆ ಸರಿಯುತ್ತಾ ನಿಮ್ಮ ಆರ್ಥಿಕ ಸ್ಥಿತಿ ಅತ್ಯುತ್ತಮವಾಗಿರುತ್ತದೆ. ಶುಭದಿನ:17. ಶ್ರೀ ದುರ್ಗಾಪಾರಾಯಣ ಮಾಡಿರಿ




ವೈಯಕ್ತಿಕ ಹಾಗೂ ವ್ಯಾಪಾರ ಕ್ಷೇತ್ರಕ್ಕೆ ಸಂಬಂಧಿಸಿದ ವಿಷಯಗಳ ಪರಾಮರ್ಶೆಗೆ ಹೆಚ್ಚು ಸಮಯವನ್ನು ಮೀಸಲಿಡಲಿದ್ದೀರಿ. ಆಹಾರ, ನೀರಿನ ಸೇವನೆಯಲ್ಲಿ ಬಹಳ ಎಚ್ಚರಿಕೆಯಿಂದ ಇರಬೇಕು. ಉದ್ಯೋಗ ಸ್ಥಳದಲ್ಲಿ ಒತ್ತಡದ ಸನ್ನಿವೇಶ ಎದುರಾಗಲಿದೆ. ಸಂಗಾತಿ ಹೇಳುವ ಕೆಲವು ವಿಚಾರಗಳನ್ನು ಪೂರ್ತಿ ಮಾಡುವ ಸಲುವಾಗಿಯೇ ಹೆಚ್ಚು ಸಮಯ ಮೀಸಲಿಡುತ್ತೀರಿ. ಶುಭದಿನ: 18. ವಿಷ್ಣು ಸಹಸ್ರನಾಮ ಪಠಿಸಿರಿ.





ವಾರದ ಶುರುವಿನಲ್ಲಿ ಕೌಟುಂಬಿಕ ವಿಚಾರದಲ್ಲಿ ಉತ್ತಮ ಹಾಗೂ ಸೂಕ್ತವಾದ ಹಲವು ಅವಕಾಶಗಳು ದೊರೆಯಲಿವೆ. ಗ್ರಹಗತಿಗಳು ಉತ್ತಮವಾಗಿ ಇರುವುದರಿಂದ ನಿಮಗೆ ದೊರೆಯುವ ಅವಕಾಶಗಳನ್ನು ಪರಿಣಾಮಕಾರಿಯಾಗಿ ಬಳಸಿಕೊಳ್ಳಲಿದ್ದೀರಿ. ನಿಮ್ಮ ಶ್ರಮಕ್ಕೆ ಅದ್ಭುತವಾದ ಯಶಸ್ಸು ದೊರೆಯಲಿದೆ. ಹಲವು ಬಗೆಯಲ್ಲಿ ನಿಮ್ಮ ಬೆಳವಣಿಗೆ ಆಗಲಿದೆ. ಶುಭದಿನ: 16. ಹನುಮಾನ್ ಚಾಲೀಸ್ ಪಠಿಸಿರಿ.





ವಾರದ ಶುರುವಿನಲ್ಲಿ ವೈಯಕ್ತಿಕ ಹಾಗೂ ವೃತ್ತಿಪರ ಜೀವನದಲ್ಲಿ ಕೆಲವು ಬಿಕ್ಕಟ್ಟು ಎದುರಾಗುತ್ತವೆ. ಕುಟುಂಬದಲ್ಲಿ ಸಂತೋಷ ಸಮಾಧಾನ ಇರುತ್ತದೆ. ಉದ್ಯೋಗ ಸ್ಥಳದಲ್ಲಿ ಹಿರಿಯ ಅಧಿಕಾರಿಗಳಿಂದ ಸಮಸ್ಯೆ ಎದುರಾಗುತ್ತದೆ. ಪೋಷಕರ ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿ ವಹಿಸಬೇಕಾಗುತ್ತದೆ. ಬಾಕಿ ಉಳಿದ ಕೆಲಸಗಳನ್ನು ಪೂರೈಸುವತ್ತ ಗಮನ ಇರುತ್ತದೆ. ಶುಭದಿನ: 14. ಈಶ್ವರನಿಗೆ ರುದ್ರಾಭಿಷೇಕ ಮಾಡಿರಿ.




ವಾರದ ಆರಂಭವು ಬಹಳ ಸಂತೋಷವಾಗಿರುತ್ತದೆ. ಒಂದು ಕಡೆ ಆದಾಯ ಹೆಚ್ಚಿಸಿಕೊಳ್ಳುವುದಕ್ಕೆ ಉತ್ತಮ ಅವಕಾಶಗಳು ದೊರೆಯಲಿವೆ. ಇನ್ನೊಂದು ಕಡೆ ಮನೆಯನ್ನು ಸಲೀಸಾಗಿ ನಡೆಸಲು ಬೇಕಾದ ತೀರ್ಮಾನಗಳನ್ನು ಕೈಗೊಳ್ಳುತ್ತೀರಿ. ಇದರಿಂದ ನಿಮ್ಮ ಆತ್ಮವಿಶ್ವಾಸ ಮತ್ತಷ್ಟು ಹೆಚ್ಚಾಗಲಿದೆ. ವಾರದ ಮಧ್ಯ ಭಾಗದಲ್ಲಿ ನಿದ್ರೆಯ ವಿಚಾರದಲ್ಲಿ ತೊಂದರೆ ಎದುರಾಗಲಿದೆ. ಶುಭದಿನ: 15. ಸೌಂದರ್ಯಲಹರಿ ಪಠಿಸಿರಿ.





ವ್ಯಾಪಾರದ ಉನ್ನತಿಗೆ ಹೆಚ್ಚು ಶ್ರಮ ಹಾಕಲಿದ್ದೀರಿ. ಇದೇ ವೇಳೆ ಸಣ್ಣ ಪುಟ್ಟ ವರ್ತಕರ ಜತೆಗೆ ಸಂಪರ್ಕ ಸಾಧಿಸಿ, ವ್ಯಾಪಾರ ವಿಸ್ತರಣೆಗೆ ಅಗತ್ಯ ಇರುವ ನಿರ್ಧಾರಗಳನ್ನು ಮಾಡಲಿದ್ದೀರಿ. ಈ ಪ್ರಯತ್ನದಲ್ಲಿ ನಿಮಗೆ ಯಶಸ್ಸು ದೊರೆಯಲಿದೆ. ಈ ಅವಧಿಯಲ್ಲಿ ಆರೋಗ್ಯ ಉತ್ತಮವಾಗಿ ಇರುತ್ತದೆ. ಗ್ರಹಗತಿಗಳು ಶುಭ ದೃಷ್ಟಿ ಬೀರುವ ಸಮಯ ಇದು. ಶುಭದಿನ: 17. ಗಣಪತಿಗೆ ದೂರ್ವಾರ್ಚನೆ ಮಾಡಿಸಿರಿ.





ಮಾಧ್ಯಮ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಯಶಸ್ಸು ದೊರೆಯುತ್ತದೆ. ಈ ಅವಧಿಯಲ್ಲಿ ಮನೆಯಲ್ಲಿ ಧಾರ್ಮಿಕ ಕಾರ್ಯಕ್ರಮಗಳನ್ನು ಆಯೋಜನೆ ಮಾಡುವ ಸಾಧ್ಯತೆ ಇದೆ. ದೈನಂದಿನ ಕೆಲಸ ಕಾರ್ಯಗಳಲ್ಲಿ ಏರುಪೇರಾಗಬಹುದು. ವಾರದ ಮಧ್ಯಭಾಗದಲ್ಲಿ ಉದ್ಯೋಗದಲ್ಲಿ ಬಡ್ತಿ ದೊರೆಯುವ ಸಾಧ್ಯತೆಗಳಿವೆ. ವೈಯಕ್ತಿಕ ಸಂಬಂಧದಲ್ಲಿ ಪರಸ್ಪರ ವಿಶ್ವಾಸ ಹೆಚ್ಚಾಗುತ್ತದೆ. ಶುಭದಿನ: 18. ನವಗ್ರಹ ಸ್ತೋತ್ರ ಪಠಿಸಿರಿ.





ಸಾಮಾಜಿಕ ರಾಜಕೀಯ ಜೀವನದಲ್ಲಿ ನಿಮ್ಮ ಪ್ರಭಾವದ ಬಗ್ಗೆ ಆತಂಕ ಎದುರಾಗುತ್ತದೆ. ವೈಯಕ್ತಿಕ ಸಂಬಂಧದಲ್ಲಿ ಪರಸ್ಪರ ನಿಂದನೆಗಳನ್ನು ಮಾಡುವ ಸಾಧ್ಯತೆ ಇದೆ. ವಾರದ ಮಧ್ಯ ಭಾಗದಲ್ಲಿ ಧಾರ್ಮಿಕ ಕಾರ್ಯಕ್ರಮಗಳಲ್ಲಿ ಬಿಡುವಿಲ್ಲದೆ ತೊಡಗಿಸಿಕೊಳ್ಳುತ್ತೀರಿ. ಪ್ರಯಾಣ ಮಾಡಲಿದ್ದೀರಿ. ನಿಮ್ಮ ವಿಶ್ವಾಸಾರ್ಹತೆ ಕಾಯ್ದುಕೊಳ್ಳುವಲ್ಲಿ ಸಫಲರಾಗುತ್ತೀರಿ. ಶುಭದಿನ: 16. ಶನಿ ಸ್ತೋತ್ರ ಪಠಣ ಮಾಡಿರಿ.





ಸಾರ್ವಜನಿಕ ಸಂಪರ್ಕ ಹೆಚ್ಚು ಮಾಡಿಕೊಳ್ಳಲು ಶ್ರಮ ಹಾಕುತ್ತೀರಿ. ಈ ಪ್ರಯತ್ನದಿಂದ ನಿಮಗೆ ಲಾಭ ಆಗುತ್ತದೆ. ವ್ಯಾಪಾರ ಉದ್ಯಮ ನಡೆಸುತ್ತಿರುವವರು ಈಗ ನೀಡುತ್ತಿರುವ ಸೇವೆಗಳ ಜೊತೆಗೆ ಇನ್ನಷ್ಟು ಸೇರ್ಪಡೆ ಮಾಡಲಿದ್ದೀರಿ. ಈ ಸಮಯದಲ್ಲಿ ಆರೋಗ್ಯ ಚೆನ್ನಾಗಿದೆ ಎಂದು ನಿಮಗೇ ಅನಿಸುತ್ತದೆ. ವೈವಾಹಿಕ ಜೀವನವು ಸಾಮಾನ್ಯವಾಗಿರುತ್ತದೆ. ಶುಭದಿನ: 15. ಶ್ರೀವೆಂಕಟೇಶ್ವರ ಸ್ತೋತ್ರ ಪಠಿಸಿರಿ




ವಾರದ ಆರಂಭದಲ್ಲಿ ವ್ಯಾಪಾರ ಉದ್ಯಮದ ಬಗ್ಗೆ ಗಮನ ಹೆಚ್ಚು ನೀಡಬೇಕಾಗುತ್ತದೆ. ಬಹಳ ಕಾಲದಿಂದ ಜಾರಿಗೆ ತರಬೇಕು ಅಂದುಕೊಂಡಿದ್ದ ವಿಚಾರಗಳನ್ನು ಒಂದೊಂದಾಗಿ ಜಾರಿಗೆ ತರುತ್ತೀರಿ. ನಿಮ್ಮ ಕೈ ಕೆಳಗೆ ಕೆಲಸ ಮಾಡುವವರಿಗೆ ಪ್ರೋತ್ಸಾಹ ನೀಡುತ್ತೀರಿ. ಉತ್ಪಾದನೆ ಕ್ಷೇತ್ರದಲ್ಲಿ ಕಾರ್ಯ ನಿರ್ವಹಿಸುವವರಿಗೆ ಹಣಕಾಸಿನ ಕೊರತೆ ಹಾಗೂ ಕಚ್ಚಾ ವಸ್ತುಗಳ ಕೊರತೆ ಕಾಡಲಿದೆ. ಶುಭದಿನ: 14. ಶಿವಕವಚ ಪಠಣ ಮಾಡಿರಿ.




ನಿಮ್ಮ ಹಣದ ಸದುಪಯೋಗ ಮಾಡಿಕೊಳ್ಳುವ ಬಗ್ಗೆ ಯೋಜನೆ ರೂಪಿಸಲಿದ್ದೀರಿ. ಮಾರಾಟ ಕ್ಷೇತ್ರದಲ್ಲಿ ಕಾರ್ಯನಿರ್ವಹಿಸುವವರಿಗೆ ಲಾಭ ಪಡೆಯಲು ಅತ್ಯುತ್ತಮ ಅವಕಾಶಗಳಿವೆ. ನೀವು ಹಾಕಿಕೊಂಡ ಗುರಿಯನ್ನು ಅಂದುಕೊಂಡ ಸಮಯಕ್ಕಿಂತ ಮುಂಚಿತವಾಗಿಯೇ ತಲುಪುವ ಎಲ್ಲ ಸಾಧ್ಯತೆಗಳಿವೆ. ಪ್ರೀತಿ ಪ್ರೇಮದಲ್ಲಿ ಇರುವ ಸಂಗಾತಿಯ ಭಾವನೆಗೆ ಗೌರವ ನೀಡುತ್ತೀರಿ. ಶುಭದಿನ: 17. ದಕ್ಷಿಣಾಮೂರ್ತಿ ಸ್ತೋತ್ರ ಪಠಿಸಿರಿ.




ಈವರೆಗೆ ಮಾಡಿದ ಕೆಲಸಗಳು ಸರಿಯಾಗಿ ಇವೆಯೇ ಎಂದು ಪರಿಶೀಲನೆ ಮಾಡುವುದಕ್ಕೆ ವಾರದ ಆರಂಭದ ದಿನಗಳು ಮೀಸಲಾಗುತ್ತವೆ. ನೀವು ಯಾರನ್ನು ಆಯ್ಕೆ ಮಾಡಿಕೊಂಡಿರೋ ಅವರಿಗೆ ವಹಿಸಿದ ಕೆಲಸಗಳನ್ನು ಸರಿಯಾಗಿ ಮಾಡುವ ತಿಳಿವಳಿಕೆ ಇರುವುದಿಲ್ಲ. ನೀವು ಖರ್ಚು ಮಾಡಿದ ಹಣಕ್ಕೆ ತಕ್ಕ ಪ್ರತಿಫಲ ಇಲ್ಲ ಎಂದು ಸ್ವಲ್ಪಮಟ್ಟಿಗೆ ಬೇಸರ ಆಗುತ್ತದೆ. ಶುಭದಿನ: 16. ಚಂಡಿ ಪಾರಾಯಣ ಮಾಡಿರಿ.